ಇಲಾಖೆ / ವಿಷಯ: DEPARTMENT / SUBJECT: ಲೋಕೋಪಯೋಗಿ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 22/05/2019

# ಜ್ಯೇಷ್ಠತಾ ಪಟ್ಟಿ ಸಿದ್ಧತೆಗೆ ತಜ್ಞರ ಸಮಿತಿ: ಮನವಿ

**ಬೆಂಗಳೂರು:** ಬಡ್ತಿ ಮೀಸಲು ಕಾಯಿದೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯಲ್ಲಿ ಜೇಷ್ಠತಾ ಪಟ್ಟಿ ಸಿದ್ಧಪಡಿಸಲು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಸಮಿತಿಯನ್ನು ರಚಿಸುವಂತೆ ರಾಜ್ಯ ಸರಕಾರಿ ಎಸ್‌ಸಿ-ಎಸ್‌ಟಿ ನೌಕರರ ಸಮನ್ವಯ ಸಮಿತಿ ಆಗ್ರಹಿಸಿದೆ.

ಸಮಿತಿ ಅಧ್ಯಕ್ಷ ಡಿ.ಶಿವಶಂಕರ್ ನೇತೃತ್ವದ ನಿಯೋಗ ಮಂಗಳವಾರ ಡಿಸಿಎಂ ಡಾ.ಜಿ.ಪರಮೇಶ್ವರ್ ಹಾಗೂ ಸಿಎಸ್ ಟಿ.ಎಂ.ವಿಜಯಭಾಸ್ಕರ್ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿತು. ಲೋಕೋಪಯೋಗಿ ಇಲಾಖೆಯಲ್ಲಿ ಈ ಹಿಂದೆ ಜೇಷ್ಠತಾ ಪಟ್ಟಿ ಸಿದ್ಧಪಡಿಸುವಾಗ ಬಿ.ಕೆ.ಪವಿತ್ರ ಪ್ರಕರಣದ ತೀರ್ಪನ್ನು ತಿರುಚಿ ಕೆಲವೊಂದು ಲೋಪ ಮಾಡಲಾಗಿದೆ. ಇದರಿಂದಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದ ನೌಕರರಿಗೆ ಅನ್ಯಾಯವಾಗಿ, ಹಿಂಬಡ್ತಿಯಾಗಿದೆ. ಇಲಾಖೆ ಹಾಗೂ ಸಚಿವಾಲಯ ಸಿಬ್ಬಂದಿಗೆ ನ್ಯಾಯಾಲಯದ ತೀರ್ಪನ್ನು ಸರಿಯಾಗಿ ಅರ್ಥೈಸಿಕೊಂಡು ಸೇವಾ ನಿಯಮಾನುಸಾರ ಜೇಷ್ಠತಾ ಪಟ್ಟಿ ತಯಾರಿಸಲು ಕಾನೂನಿನ ಅರಿವು ಇಲ್ಲದಿರುವುದು ಮತ್ತು ಉದ್ದೇಶಪೂರ್ವಕವಾಗಿಯೂ ಈ ತಪ್ಪು ನಡೆದಿರಬಹುದು. ಇದರಿಂದ ಲೋಕೋಪಯೋಗಿ ಇಲಾಖೆಯಲ್ಲಿ ಪರಿಶಿಷ್ಟರ ಬಹಳಷ್ಟು ಎಂಜಿನಿಯರ್‌ಗಳಿಗೆ ಹಿಂಬಡ್ತಿಯಾಗಿದೆ ಎಂದು ನಿಯೋಗ ದೂರಿತು.